ಉ) ಹೆಚ್.ಎಲ್.ಎ. ಟಿಷ್ಯೂ ಟ್ಯಾಪಿಂಗ್ ಉಪಕರಣಗಳು ನಮ್ಮ ದೇಶದಲ್ಲಿ ಲಭ್ಯವಿರುವುದು.

ಊ) ಹೌದು

ಆರೋಗ್ಯ ಕೇಂದ್ರಗಳ ಮಂಜೂರಾತಿ

1540(1871); ಶ್ರೀ ಐಹೋಳೆ ಡಿ. ಮಹಾಲಿಂಗಪ್ಪ (ರಾಯಭಾಗ)

ಅ) ಬೆಳಗಾವಿ ಜಿಲ್ಲೆ ರಾಯಭಾಗ ತಾಲ್ಲೂಕಿನ ದಿಗ್ಗೇವಾಡಿ ಹಾಗೂ ಬೆಂಡವಾಡ ಗ್ರಾಮಗಳಲ್ಲಿ ಹೊಸದಾಗಿ ಪ್ರಾಥಮಿಕ ಆರೋಗ್ಯ ಉಪಕೇಂದ್ರ ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮವೇನು;

ಇ) ಸದರಿ ಆರೋಗ್ಯ ಉಪಕೇಂದ್ರಗಳ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಈ) ರಾಯಭಾಗ ತಾಲ್ಲೂಕಿನ ನಲಸಾಪೂರ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಸದರಿ ಆರೋಗ್ಯ ಕೇಂದ್ರದಲ್ಲಿ ಸಿಬ್ಬಂದಿ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಊ) ಹಾಗಿದ್ದಲ್ಲಿ ಸಿಬ್ಬಂದಿ ಕೊರತೆ ನೀಗಿಸಲು ಸರ್ಕಾರ ಕೈಗೊಂಡ ಕ್ರಮವೇನು?

ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಇಲ್ಲ

ಆ) ಅನ್ವಯಿಸುವುದಿಲ್ಲ

ಇ) ಇಲ್ಲ

ಈ) ಇಲ್ಲ

ಉ) ಬಂದಿದೆ

ಊ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕ ಸಬಲೀಕರಣ ಇಲಾಖೆ ದಿನಾಂಕ: 23.01.2015ರಂದು ವಿಕಲಚೇತನರಿಗೆ ಮೀಸಲಾತಿ ಕುರಿತಂತೆ ಸಭೆ ಜರುಗಿದ್ದು, ಸಭೆಯ ನಡವಳಿ ಇನ್ನೂ ಅನುಮೋದನೆ ಆಗಬೇಕಾಗಿದೆ. ಈ ನಡವಳಿಯ ಆಧಾರದ ಮೇಲೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಅಂತಿಮ ಅಧಿಸೂಚನೆ ಹೊರಡಿಸಲಿದೆ. ತದನಂತರ ನೇಮಕಾತಿ ಪ್ರಕ್ರಿಯೆಗೆ ಚಾಲನೆ ನೀಡಲಾಗುವುದು.

ಹೊಸ ಮಾರ್ಗಗಳಲ್ಲಿ ಬಸ್ಸುಗಳ ಸಂಚಾರ

1542(1477); ಶ್ರೀ ಅಖಂಡ ಶ್ರೀನಿವಾಸಮೂರ್ತಿ ಆರ್. (ಪುಲಕೇಶಿ ನಗರ)

ಅ) ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಗೆ ಪುಲಕೇಶಿನಗರ ವಿಧಾನಸಭಾ ವ್ಯಾಪ್ತಿಗೆ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ಹೊಸ ಮಾರ್ಗಗಳಲ್ಲಿ ಬಸ್ಸುಗಳನ್ನು ಒದಗಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಈ ಪ್ರಸ್ತಾವನೆಯು ಯಾವ ಹಂತದಲ್ಲಿದೆ;

ಇ) ಪುಲಕೇಶಿನಗರ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬಡ ಹಾಗೂ ಮಧ್ಯಮ ವರ್ಗದ ಕುಟುಂಬದವರು ಬೃಹತ್ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಬಸ್ಸುಗಳಲ್ಲಿ ಪ್ರಯಾಣಿಸಲು ಅವಲಂಭಿತರಾಗಿರುವುದರಿಂದ ಹೊಸ ಮಾರ್ಗಗಳನ್ನು ಮಂಜೂರು ಮಾಡಲು ಸರ್ಕಾರ· ಕ್ರಮ ಕೈಗೊಳ್ಳುವುದೇ?

ಶ್ರೀ ರಾಮಲಿಂಗಾರೆಡ್ಡಿ (ಸಾರಿಗೆ ಸಚಿವರು)